**Akashvani : Bangalore**
**Regional Bulletin In Kannada**
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ
**02.08.2024 / 18.40 hrs**

ಮುಖ್ಯಾಂಶಗಳು

**೧. ನ್ಯಾನೋ ತಂತ್ರಜ್ಞಾನ ಆಧಾರಿತ ಪರಿಹಾರ ಸಂಶೋಧಿಸಲು ವಿಜ್ಞಾನಿಗಳು, ತಂತ್ರಜ್ಞರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಕರೆ**

**೨. ಪಶ್ಚಿಮಘಟ್ಟ ಪ್ರದೇಶಗಳಲ್ಲಿ ಅರಣ್ಯ ಒತ್ತುವರಿ ತೆರವಿಗೆ ಅರಣ್ಯ ಸಚಿವ ಈಶ್ವರ್ ಖಂಡ್ರೆ ಸೂಚನೆ**

**೩. ಈ ಬಾರಿಯ ಕೇಂದ್ರ ಬಜೆಟ್‌ನಲ್ಲಿ ಎಲ್ಲಾ ರಾಜ್ಯಗಳ ಸಮಾನ ಪರಿಗಣನೆ- ಕೇಂದ್ರ ಸಚಿವೆ ಶೋಭಾಕರಂದ್ಲಾಜೆ**

**೪. ನೀಟ್ ಪರೀಕ್ಷೆ ವ್ಯವಸ್ಥೆಯಲ್ಲಿನ ಲೋಪದೋಷ ಸರಿಪಡಿಸಲು ತಜ್ಞರ ಸಮಿತಿಗೆ ಸುಪ್ರೀಂಕೋರ್ಟ್ ಸೂಚನೆ**

**<><*<><>*><>**

ತಾಂತ್ರಿಕತೆ ಆಧಾರಿತ ಅನ್ವೇಷಣಾ ವಲಯದಲ್ಲಿ ಕರ್ನಾಟಕ ಎಂದಿಗೂ ಮುಂಚೂಣಿಯಲ್ಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಬೆಂಗಳೂರಿನಲ್ಲಿಂದು ಹೇಳಿದ್ದಾರೆ. ಕರ್ನಾಟಕ ತನ್ನ ಶ್ರೀಮಂತ ಸಾಂಸ್ಕೃತಿಕ ಪರಂಪರೆಗಳಿಗೆ ಮಾತ್ರವಲ್ಲದೆ, ಶೈಕ್ಷಣಿಕ ಹಾಗೂ ಸಂಶೋಧನಾ ಚಟುವಟಿಕೆಗಳಿಗೆ ಭದ್ರ ತಳಹದಿಯನ್ನು ಕಲ್ಪಿಸುವ ಕಾರ್ಯದಲ್ಲಿ ಹೆಸರುವಾಸಿಯಾಗಿದೆ ಎಂದರು. ೧೩ನೇ ಬೆಂಗಳೂರು ಇಂಡಿಯಾ ನ್ಯಾನೋ ಸಮ್ಮೇಳನ ಉದ್ಘಾಟಿಸಿ ಮಾತನಾಡಿದ ಅವರು, ದೇಶ-ವಿದೇಶಗಳ ಖ್ಯಾತ ವಿಜ್ಞಾನಿಗಳು ತಂತ್ರಜ್ಞಾನಿಗಳು ತಾಂತ್ರಿಕ ಚಿಂತಕರು ಹಾಗೂ ಉದ್ಯಮಗಳ ಖ್ಯಾತನಾಮರೊಂದಿಗೆ ನ್ಯಾನೊ ಟೆಕ್ನಾಲಜಿ ಸಮಾವೇಶದಲ್ಲಿ ಭಾಗವಹಿಸಲು ತಮಗೆ ಹೆಮ್ಮೆ ಎನಿಸುತ್ತಿದೆ ಎಂದು ಮುಖ್ಯಮಂತ್ರಿ ಸಂತಸ ವ್ಯಕ್ತಪಡಿಸಿದರು. ಐಐಎಸ್ಸಿ, ಜೆ.ಎನ್.ಸಿ.ಎ.ಎಸ್.ಆರ್ ನಂತಹ ಪ್ರತಿಷ್ಠಿತ ಸಂಶೋಧನಾ ಸಂಸ್ಥೆಗಳ ನೆರವಿನೊಂದಿಗೆ, ಬೆಂಗಳೂರು ದೇಶದ ನ್ಯಾನೋ ಟೆಕ್ ಹಬ್ ಆಗಿ ರೂಪುಗೊಳ್ಳುವ ಪೂರ್ಣ ವಿಶ್ವಾಸವಿದೆ. ಮುಂಬರುವ ವರ್ಷಗಳಲ್ಲಿ ಬೆಂಗಳೂರು ಈ ಆಧುನಿಕ ತಾಂತ್ರಿಕ ಕ್ಷೇತ್ರದಲ್ಲಿ ಪ್ರಮುಖ ಪಾತ್ರವನ್ನು ನಿಭಾಯಿಸಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. ಆಹಾರ ಭದ್ರತೆ, ಇಂಧನ ಸುರಕ್ಷತೆ, ಶುದ್ಧ ಜಲ, ಮೂಲಸೌಕರ್ಯ, ಆರೋಗ್ಯ ಸೇವೆ, ಔಷಧಿ, ತ್ಯಾಜ್ಯವಸ್ತುಗಳ ನಿರ್ವಹಣೆ, ಪರಿಸರ ನಿರ್ವಹಣೆಯಂತಹ ಕ್ಷೇತ್ರಗಳಲ್ಲಿ ಎದುರಾಗುವ ಸವಾಲುಗಳಿಗೆ ವಿನೂತನ ನ್ಯಾನೋ ಟೆಕ್ನಾಲಜಿ ಆಧಾರಿತ ಪರಿಹಾರಗಳನ್ನು ಕಂಡುಕೊಳ್ಳಬೇಕಾಗಿದೆ ಎಂದು ಸಲಹೆ ನೀಡಿದರು. ಹೆಚ್ಚುತ್ತಿರುವ ನಗರೀಕರಣ, ಜನಸಂಖ್ಯೆ ಹೆಚ್ಚಳ ಹಾಗೂ ಬದಲಾಗುತ್ತಿರುವ ಜೀವನ ಶೈಲಿಯಿಂದ ಮುಂದಿನ ದಿನಗಳಲ್ಲಿ ಈ ಸಮಸ್ಯೆಗಳು ಹೆಚ್ಚಾಗುವ ಸಾಧ್ಯತೆಗಳಿದ್ದು ಇವುಗಳಿಗೆ ನ್ಯಾನೋ ಟೆಕ್ನಾಲಜಿ ಆಧಾರಿತ ಪರಿಹಾರಗಳನ್ನು ಸಂಶೋಧಿಸಲು ವಿಜ್ಞಾನಿಗಳು ಹಾಗೂ ಇಂಜಿನಿಯರ್‌ಗಳು ಮುಂದಾಗಬೇಕು ಎಂದು ಕರೆ ನೀಡಿದರು. ಈ ಹೊಸ ತಾಂತ್ರಿಕ ಕ್ಷೇತ್ರದ ಸಾಧ್ಯತೆಗಳನ್ನು ಪೂರ್ಣ ಪ್ರಮಾಣದಲ್ಲಿ ಬಳಸಿಕೊಳ್ಳಲು ಅಂತಾರಾಷ್ಟ್ರೀಯ ಸಂಶೋಧನಾ ಸಹಭಾಗಿತ್ವ ಅತ್ಯಗತ್ಯವಾಗಿದೆ. ಇದಕ್ಕಾಗಿ ಮಾಹಿತಿ ಹಾಗೂ ತಾಂತ್ರಿಕತೆ ಪರಸ್ಪರ ವಿನಿಮಯ, ಈ ಕ್ಷೇತ್ರದಲ್ಲಿ ಎದುರಾಗುವ ಸವಾಲುಗಳ ಮತ್ತು ಅವುಗಳ ಪರಿಹಾರ ಸಾಧ್ಯತೆಗಳ ವಿಚಾರ ವಿನಿಮಯ ಮತ್ತು ಅಂತಿಮವಾಗಿ ಸಮಾಜದ ಶ್ರೇಯೋಭಿವೃದ್ಧಿಗೆ ಪೂರಕವಾಗಿ ಪ್ರತಿಭೆಗಳನ್ನು ಬೆಳೆಸುವ ಅಗತ್ಯವಿದೆ ಎಂದರು. ಇಂತಹ ಅಂತಾರಾಷ್ಟ್ರೀಯ ಸಮಾವೇಶಗಳು ಪರಸ್ಪರ ಸಂಪರ್ಕ ಸಾಧಿಸಲು, ಜ್ಞಾನವನ್ನು ಹಂಚಿಕೊಳ್ಳಲು, ತಾಂತ್ರಿಕತೆಗಳ ವಿನಿಮಯಕ್ಕೆ, ಕೌಶಲ್ಯ ಅಭಿವೃದ್ಧಿಗೆ ಹಾಗೂ ಉದ್ಯಮ ಸಹಭಾಗಿತ್ವಕ್ಕೆ ಸಾಕಷ್ಟು ಅವಕಾಶವನ್ನು ಕಲ್ಪಿಸಲಿದೆ ಎಂದು ನಾನು ಭಾವಿಸಿದ್ದೇನೆ ಎಂದು ಹೇಳಿದರು.

**<><*<><>*><>**

ರಾಜ್ಯದ ಪಶ್ಚಿಮಘಟ್ಟ ಪ್ರದೇಶಗಳಲ್ಲಿ ೨೦೧೫ರಿಂದೀಚೆಗೆ ಆಗಿರುವ ಎಲ್ಲ ಅರಣ್ಯ ಒತ್ತುವರಿ ತೆರವುಗೊಳಿಸುವಂತೆ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಖಂಡ್ರೆ ಸೂಚನೆ ನೀಡಿದ್ದಾರೆ. ಈ ಸಂಬಂಧ ಇಲಾಖೆಯ ಹೆಚ್ಚುವರಿ ಮುಖ್ಯ ಕಾರ್ಯದರ್ಶಿಗಳಿಗೆ ಸೂಚನೆ ನೀಡಿರುವ ಸಚಿವರು, ಚಿಕ್ಕಮಗಳೂರು, ಶಿವಮೊಗ್ಗ, ಮೈಸೂರು, ಚಾಮರಾಜಗರ, ಬೆಳಗಾವಿ, ದಕ್ಷಿಣ ಕನ್ನಡ, ಉತ್ತರ ಕನ್ನಡ, ಉಡುಪಿ, ಕೊಡಗು, ಹಾಸನ ಸೇರಿದಂತೆ ಪಶ್ಚಿಮ ಘಟ್ಟದ ಎಲ್ಲ ಗಿರಿ ಪ್ರದೇಶಗಳಲ್ಲಿ ಅನಧಿಕೃತವಾಗಿ ಮತ್ತು ಅರಣ್ಯ ಪ್ರದೇಶ ಒತ್ತುವರಿ ಮಾಡಿ ನಿರ್ಮಿಸಲಾಗಿರುವ ಬಡಾವಣೆ, ತೋಟ, ಹೋಂ ಸ್ಟೇ ಮತ್ತು ರೆಸಾರ್ಟ್‌ಗಳ ವಿರುದ್ಧ ಕ್ರಮ ಕೈಗೊಳ್ಳಲು, ಅರಣ್ಯ ಒತ್ತುವರಿಯನ್ನು ತಕ್ಷಣದಿಂದಲೇ ತೆರವುಗೊಳಿಸಲು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವಂತೆ ಮತ್ತು ೧ ತಿಂಗಳೊಳಗೆ ಕೈಗೊಂಡ ಕ್ರಮದ ವರದಿ ಸಲ್ಲಿಸುವಂತೆ ಸೂಚಿಸಿದ್ದಾರೆ.

**<><*<><>*><>**

ಈ ಬಾರಿಯ ಕೇಂದ್ರ ಬಜೆಟ್‌ನಲ್ಲಿ ಕರ್ನಾಟಕ ಸೇರಿದಂತೆ ದೇಶದ ಎಲ್ಲ ರಾಜ್ಯಗಳನ್ನು ಸಮಾನವಾಗಿ ಪರಿಗಣಿಸಲಾಗಿದೆ. ಕರ್ನಾಟಕಕ್ಕೆ ಯಾವುದೇ ರೀತಿಯ ಅನ್ಯಾಯವಾಗಿಲ್ಲ ಎಂದು ಕೇಂದ್ರ ಎಂಎಸ್‌ಎಂಇ, ಕಾರ್ಮಿಕ ಹಾಗೂ ಉದ್ಯೋಗ ಖಾತೆ ರಾಜ್ಯ ಸಚಿವೆ ಶೋಭಾಕರಂದ್ಲಾಜೆ ಮೈಸೂರಿನಲ್ಲಿಂದು ಹೇಳಿದ್ದಾರೆ. ಬಿಜೆಪಿ ಕಚೇರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮೇಕೆದಾಟು ಯೋಜನೆ ನ್ಯಾಯಾಲಯದಲ್ಲಿರುವ ಕಾರಣ, ಕೇಂದ್ರ ಸರ್ಕಾರ ಈ ಯೋಜನೆಗೆ ಆರ್ಥಿಕ ನೆರವು ನೀಡಲು ಸಾಧ್ಯವಾಗುವುದಿಲ್ಲ ಎಂದರು. ರಾಜ್ಯದ ಎರಡು ಹಗರಣಗಳ ಬಗ್ಗೆ ರಾಜ್ಯಪಾಲರಿಗೆ ಖಾಸಗಿ ವ್ಯಕ್ತಿಯೊಬ್ಬರು ದೂರು ನೀಡಿರುವ ಹಿನ್ನೆಲೆಯಲ್ಲಿ ರಾಜ್ಯಪಾಲರು ಕಾನೂನು ಸಲಹೆ ಪಡೆದು, ಮುಖ್ಯಮಂತ್ರಿಗಳಿಗೆ ಶೋಕಾಸ್ ನೋಟಿಸ್ ನೀಡಿದ್ದಾರೆ. ಈ ಎರಡೂ ಪ್ರಕರಣಗಳಲ್ಲಿ ಪ್ರಮುಖ ಆರೋಪಿ ಸ್ಥಾನದಲ್ಲಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ನೋಟಿಸ್ ಅಂಗೀಕರಿಸಿ ರಾಜೀನಾಮೆ ನೀಡಿ, ತನಿಖೆಗೆ ಸಹಕರಿಸಲಿ ಎಂದು ಶೋಭಾಕರಂದ್ಲಾಜೆ ಆಗ್ರಹಿಸಿದ್ದಾರೆ.

**<><*<><>*><>**

ಕೊಡಗು ಜಿಲ್ಲೆಯಲ್ಲಿ ಭಾರೀ ಮಳೆಯಿಂದ ಹಾನಿಗೀಡಾದ ಹಲವು ಪ್ರದೇಶಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಭೇಟಿ ನೀಡಿ, ಸಂತ್ರಸ್ತರಿಗೆ ವಿಳಂಬ ರಹಿತವಾಗಿ ಪರಿಹಾರ ನೀಡುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ಪೊನ್ನಂ ಪೇಟೆ ತಾಲೂಕಿನ ಶ್ರೀಮಂಗಲ ಕುಟ್ಟದ ಗುಡ್ಡ ಕುಸಿತ ಪ್ರದೇಶಕ್ಕೂ ಭೇಟಿ ನೀಡಿ, ಅವಲೋಕಿಸಿದರು. ಗುಡ್ಡ ಕುಸಿತದ ಪರಿಣಾಮ ಸುಮಾರು ೨೦ಕ್ಕೂ ಹೆಚ್ಚು ಕುಟುಂಬಗಳು ಸಂಪರ್ಕ ಕಳೆದುಕೊಂಡಿದ್ದು, ಅಲ್ಲಿ ತೂಗು ಸೇತುವೆ ನಿರ್ಮಿಸುವ ಜೊತೆಗೆ ತುರ್ತಾಗಿ ರಸ್ತೆ ನಿರ್ಮಾಣ ಸೇರಿದಂತೆ ಇತರ ದುರಸ್ಥಿ ಕಾರ್ಯಗಳನ್ನು ತ್ವರಿಗತಿಯಲ್ಲಿ ಮುಗಿಸುವಂತೆ ಸೂಚಿಸಿದರು. ಇದೇ ವೇಳೆ ಸಂತ್ರಸ್ತ ಕುಟುಂಬದ ಸದಸ್ಯರ ಜೊತೆಗೂ ಚರ್ಚಿಸಿದರು. ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್, ಗುಡ್ಡ ಕುಸಿತದ ಪರಿಣಾಮಗಳು ಹಾಗೂ ಕೈಗೊಳ್ಳಲಾಗಿರುವ ಸುರಕ್ಷತಾ ಕ್ರಮಗಳ ಕುರಿತು ಮುಖ್ಯಮಂತ್ರಿಗಳಿಗೆ ವಿವರಿಸಿದರು. ಜಿಲ್ಲಾ ಉಸ್ತುವಾರಿ ಸಚಿವ ಬೋಸರಾಜು, ಶಾಸಕರುಗಳಾದ ಪೊನ್ನಣ್ಣ, ಮಂತರ್ ಗೌಡ, ಸೇರಿದಂತೆ ಗಣ್ಯರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು. ಇದಕ್ಕೂ ಮೈಸೂರು ಮಂಡಕ್ಕಳ್ಳಿ ವಿಮಾನ ನಿಲ್ದಾಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಮುಖ್ಯಮಂತ್ರಿಗಳು, ಮೂಡಾ ನಿವೇಶನ ಅಕ್ರಮ ಹಾಗೂ ವಾಲ್ಮೀಕಿ ನಿಗಮ ಹಗರಣ ಪ್ರಕರಣಗಳಲ್ಲಿ ತಮ್ಮದು ಯಾವುದೇ ಪಾತ್ರವಿಲ್ಲ. ಈಗಾಗಲೇ ವಾಲ್ಮೀಕಿ ಹಗರಣವನ್ನು ಎಸ್‌ಐಟಿ ಹಾಗೂ ಸಿಬಿಐ ತನಿಖೆ ನಡೆಸುತ್ತಿವೆ ಎಂದು ಅವರು ಸ್ಪಷ್ಟಪಡಿಸಿದರು. ರಾಜ್ಯಪಾಲರು ನೀಡಿರುವ ಶೋಕಾಸ್ ನೋಟೀಸ್ ಕಾನೂನು ಬಾಹಿರವಾಗಿದೆ. ಈಗಾಗಲೇ ಮುಖ್ಯ ಕಾರ್ಯದರ್ಶಿಗಳು ಎರಡು ಬಾರಿ ಸುದೀರ್ಘ ಪತ್ರ ಬರೆದಿದ್ದರೂ, ರಾಜಕೀಯ ಒತ್ತಡದಿಂದ ಶೋಕಾಸ್ ನೋಟೀಸ್ ನೀಡಿದ್ದಾರೆ ಎಂದು ಹೇಳಿದರು. ರಾಜ್ಯದ ಪ್ರವಾಹ ಪೀಡಿತ ಪ್ರದೇಶಗಳಲ್ಲಿನ ಜನರ ಸಂಕಷ್ಟ ಆಲಿಸಲು ಸಚಿವರನ್ನು ನಿಯೋಜಿಸಲಾಗಿದೆ. ಅತಿವೃಷ್ಟಿಯಿಂದ ರಾಜ್ಯದ ಹಲವು ಜಿಲ್ಲೆಗಳಲ್ಲಿ ಭೂಕುಸಿತ, ಮನೆಗಳಿಗೆ ಹಾನಿ ಸೇರಿದಂತೆ ಉಂಟಾಗಿರುವ ನಷ್ಟಗಳ ಬಗ್ಗೆ ವರದಿ ತರಿಸಿಕೊಂಡು ಸಚಿವ ಸಂಪುಟದ ನಿರ್ಣಯದಂತೆ ಪರಿಹಾರ ನೀಡಲಾಗುವುದು. ಮನೆಗಳ ನಿರ್ಮಾಣಕ್ಕೂ ಸರ್ಕಾರ ಮುಂದಾಗಲಿದೆ ಎಂದರು.

**<><*<><>*><>**

ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆ ಪ್ರಕರಣ ಸಂಬಂಧ ಸುಪ್ರೀಂ ಕೋರ್ಟ್ ಹಲವು ಮಾರ್ಗಸೂಚಿಗಳನ್ನು ನೀಡಿದ್ದು, ಪರೀಕ್ಷೆ ವ್ಯವಸ್ಥೆಯಲ್ಲಿನ ಲೋಪದೋಷಗಳನ್ನು ಆಮೂಲಾಗ್ರವಾಗಿ ಸರಿಪಡಿಸುವಂತೆ ತಜ್ಞರ ಸಮಿತಿಗೆ ಸೂಚಿಸಿದೆ. ಪ್ರಶ್ನೆಪತ್ರಿಕೆ ಮುದ್ರಣದಿಂದ ಆರಂಭಿಸಿ ಪರೀಕ್ಷಾ ಕೇಂದ್ರಗಳಿಗೆ ತಲುಪುವ ವರೆಗೆ ಎಲ್ಲ ಎಚ್ಚರಿಕೆ ಕ್ರಮಗಳನ್ನು ವಹಿಸಬೇಕು. ಅಗತ್ಯವಿರುವೆಡೆ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಬೇಕು ಎಂದು ನ್ಯಾಯಾಲಯ ಸೂಚಿಸಿದೆ. ಪರೀಕ್ಷೆಗೆ ಸಂಬಂಧಿಸಿದ ಎಲ್ಲ ಗೊಂದಲಗಳನ್ನು ಈ ವರ್ಷವೇ ಬಗೆಹರಿಸಬೇಕು ಇದು ಮುಂದಿನ ವರ್ಷಕ್ಕೆ ಮುಂದುವರಿಯಬಾರದು ಎಂದು ಮುಖ್ಯ ನ್ಯಾಯಮೂರ್ತಿ ಡಿ.ವೈ.ಚಂದ್ರಚೂಡ್ ನೇತೃತ್ವದ ತ್ರಿಸದಸ್ಯ ಪೀಠ ಕೇಂದ್ರಕ್ಕೆ ಸೂಚಿಸಿದೆ.

<><*<><>*><>

ಕೇರಳದ ವಯನಾಡಿನ ಭೂಕುಸಿತ ದುರಂತದಲ್ಲಿ ಮೃತಪಟ್ಟಿದ್ದ ಮಂಡ್ಯ ಜಿಲ್ಲೆ ಕೆಆರ್ ಪೇಟೆಯ ಕತ್ತರಘಟ್ಟ ಮೂಲದ ಲೀಲಾವತಿ ಹಾಗೂ ಮೊಮ್ಮಗ ನಿಹಾಲ್ ಅವರ ಮನೆಗೆ ಜಿಲ್ಲಾ ಉಸ್ತುವಾರಿ ಸಚಿವರೂ ಆಗಿರುವ ಕೃಷಿ ಸಚಿವ ಎನ್.ಚಲುವರಾಯಸ್ವಾಮಿ ಇಂದು ಭೇಟಿ ನೀಡಿ, ಕುಟುಂಬ ಸದಸ್ಯರಿಗೆ ಸಾಂತ್ವಾನ ಹೇಳಿದರು. ಇದೇ ಕುಟುಂಬದ ಮೂರು ಮಂದಿ ವಯನಾಡಿನಲ್ಲಿ ಚಿಕಿತ್ಸೆ ಪಡೆಯುತ್ತಿದ್ದು, ಅವರಿಗೆ ಉತ್ತಮ ಚಿಕಿತ್ಸೆ ಕಲ್ಪಿಸಲು, ಅಗತ್ಯ ಕ್ರಮ ಕೈಗೊಳ್ಳುವುದಾಗಿ ಹೇಳಿದರು. ಇದೇ ಸಂದರ್ಭದಲ್ಲಿ ಮೃತರ ಕುಟುಂಬಕ್ಕೆ ರಾಜ್ಯ ಸರ್ಕಾರದ ವತಿಯಿಂದ ಐದು ಲಕ್ಷ ರೂಪಾಯಿ ಪರಿಹಾರ ಕೊಡಿಸುವುದಾಗಿ ಸಚಿವರು ಭರವಸೆ ನೀಡಿದರು.

<><*<><>*><>

ಉತ್ತರಕನ್ನಡ ಜಿಲ್ಲೆಯಲ್ಲಿ ಇಂದು ಸಹ ಮಳೆ ಮುಂದುವರೆದಿದ್ದು, ಹೊನ್ನಾವರ, ಕುಮಟಾ ಹಾಗೂ ಅಂಕೋಲಾ ತಾಲೂಕಿನ ಹಲವೆಡೆ ಮನೆಗಳು, ಕೃಷಿಭೂಮಿ ಹಾಗೂ ತೋಟಗಳ ಜಲಾವೃತವಾಗಿವೆ. ಹೊನ್ನಾವರ ತಾಲೂಕಿನ ಗುಂಡಬಾಳ ಹಾಗೂ ಭಾಸ್ಕೇರಿ ನದಿಗಳು ಉಕ್ಕೇರಿ ನದಿಯ ಅಕ್ಕಪಕ್ಕದ ಮನೆಗಳು, ತೋಟಗಳು ಜಲಾವೃತಗೊಂಡಿವೆ. ಗುಂಡಿಬೈಲ್ ಗ್ರಾಮದ ಹಲವು ಮನೆಗಳಿಗೆ ನೀರು ನುಗ್ಗಿದೆ. ತೋಟ, ಗದ್ದೆಗಳು ಜಲಾವೃತಗೊಂಡಿದೆ. ಜನರನ್ನು ಕಾಳಜಿ ಕೇಂದ್ರಕ್ಕೆ ಸ್ಥಳಾಂತರಿಸಲಾಗಿದೆ. ಕುಮಟಾದಲ್ಲಿ ಚಂಡಿಕಾ ನದಿ ತುಂಬಿಹರಿಯುತ್ತಿದ್ದು, ನದಿ ತಟದ ಎಡಬಲ ದಂಡೆಯ ಪ್ರದೇಶಗಳಲ್ಲಿ ಪ್ರವಾಹ ಉಂಟಾಗಿದೆ. ಭಟ್ಕಳದಲ್ಲೂ ಸಹ ಭಾರೀ ಗಾಳಿ ಮಳೆ ಮುಂದುವರೆದಿದೆ. ತಗ್ಗು ಪ್ರದೇಶಗಳಲ್ಲಿ ನೀರು ನುಗ್ಗಿ ಜನ ಪರದಾಡುವಂತಾಗಿದೆ.

<><*<><>*><>

ಹಿಂದುಳಿದ ಕಲ್ಯಾಣ ಕರ್ನಾಟಕ ಪ್ರದೇಶದ ಪ್ರಮುಖ ಜಿಲ್ಲೆ ರಾಯಚೂರಿನಲ್ಲಿ ಅಖಿಲ ಭಾರತ ವೈದ್ಯಕೀಯ ವಿಜ್ಞಾನ ಸಂಸ್ಥೆ-ಏಮ್ಸ್ ಸ್ಥಾಪಿಸಬೇಕೆಂಬ ತನ್ನ ಬೇಡಿಕೆಯನ್ನು ರಾಜ್ಯ ಸರ್ಕಾರ ಮತ್ತೊಮ್ಮೆ ಕೇಂದ್ರ ಸರ್ಕಾರದ ಮುಂದಿರಿಸಿದೆ. ರಾಯಚೂರು ಜಿಲ್ಲಾ ಉಸ್ತುವಾರಿಯೂ ಆಗಿರುವ ವೈದ್ಯಕೀಯ ಶಿಕ್ಷಣ ಸಚಿವರು, ನವದೆಹಲಿಯಲ್ಲಿಂದು ಕೇಂದ್ರ ಆರೋಗ್ಯ ಸಚಿವ ಜೆ.ಪಿ.ನಡ್ಡಾ ಅವರನ್ನು ಭೇಟಿ ಮಾಡಿ, ರಾಯಚೂರಿಗೆ ಶೀಘ್ರವೇ ಏಮ್ಸ್ ಮಂಜೂರು ಮಾಡುವಂತೆ ಮನವಿ ಮಾಡಿದರು. ಇದೇ ಸಂದರ್ಭದಲ್ಲಿ ಸಚಿವ ಡಾ.ಶರಣಪ್ರಕಾಶ ಪಾಟೀಲ್, ಸರ್ಕಾರಿ ವೈದ್ಯಕೀಯ ಕಾಲೇಜುಗಳಲ್ಲಿ ಶೇಕಡ ೧೫ ರಷ್ಟು ಓಖ। ಕೋಟಾವನ್ನು ಮಂಜೂರು ಮಾಡುವಂತೆ ಪ್ರಸ್ತಾವನೆ ಸಲ್ಲಿಸಿದರು.

<><*<><>*><>

ಬೆಂಗಳೂರಿನ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಿಂದ ಪ್ರಸಕ್ತ ಸಾಲಿನಲ್ಲಿ ೮೨೨ ಮೆಟ್ರಿಕ್ ಟನ್ ಮಾವಿನ ಹಣ್ಣನ್ನು ೭೦ ಅಂತಾರಾಷ್ಟ್ರೀಯ ಸ್ಥಳಗಳಿಗೆ ರವಾನಿಸುವ ಮೂಲಕ ದಾಖಲೆ ನಿರ್ಮಿಸಿದೆ. ಈ ಸಾಧನೆ, ಭಾರತೀಯ ಮಾವಿನಹಣ್ಣಿಗೆ, ವಿಶೇಷವಾಗಿ ಎರಡು ಪ್ರಮುಖ ಅಂತಾರಾಷ್ಟ್ರೀಯ ತಾಣಗಳಿಗೆ ಹೆಚ್ಚುತ್ತಿರುವ ಬೇಡಿಕೆಯನ್ನು ಪೂರೈಸುವ ಪ್ರಮುಖ ದ್ವಾರವಾಗಿದೆ. ವಿಮಾನ ನಿಲ್ದಾಣ, ಉತ್ತಮ ಗುಣಮಟ್ಟದ ತಾಜಾ ಉತ್ಪನ್ನಗಳ ರಫ್ತಿನಲ್ಲಿ ತನ್ನ ಸ್ಥಾನವನ್ನು ಬಲಪಡಿಸಿಕೊಂಡಿದೆ. ಆರ್ಥಿಕ ಬೆಳವಣಿಗೆಯಲ್ಲೂ ತನ್ನ ಪಾತ್ರವನ್ನು ಮುಂದುವರೆಸಿಕೊಂಡು ಸಾಗಿದೆ ಎಂದು ವಿಮಾನ ನಿಲ್ದಾಣದ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸತ್ಯಕಿ ರಘುನಾಥ್ ತಿಳಿಸಿದ್ದಾರೆ.

<><*<><>*><>

ಫ್ರಾನ್ಸ್‌ನಲ್ಲಿ ನಡೆಯುತ್ತಿರುವ ಒಲಿಂಪಿಕ್ಸ್ ಕ್ರೀಡಾಕೂಟದ ಪ್ರಸಾರದ ಹಿನ್ನೆಲೆಯಲ್ಲಿ ಬೆಳಗ್ಗೆ ೭-೩೫ಕ್ಕೆ ಪ್ರಸಾರವಾಗುತ್ತಿದ್ದ ರಾಷ್ಟ್ರೀಯ ವಾರ್ತೆಗಳು ಇದೇ ತಿಂಗಳ ೧೧ರವರೆಗೆ ಬೆಳಗ್ಗೆ ೯ ಗಂಟೆ ೫ ನಿಮಿಷಕ್ಕೆ ಪ್ರಸಾರವಾಗಲಿದೆ.